ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1250
ಸದಸ್ಯರ ಹೆಸರು	:	ಶ್ರೀ ಎನ್. ರವಿಕುಮಾರ್
ಉತ್ತರಿಸುವ ದಿನಾಂಕ	:	08/03/2022
ಉತ್ತರಿಸುವ ಸಚಿವರು	:	ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು

ಕ್ರ ಸಂ.	ಪ್ರಶ್ನೆ	ಉತ್ತರ
(ಅ)	ಕಳೆದ 3 ವರ್ಷಗಳಲ್ಲಿ ಎಷ್ಟು ಗ್ರಾಮ ಪಂಚಾಯಿತಿಗಳು ಪುರಸಭೆಗಳಾಗಿವೆ; (ಜಿಲ್ಲಾವಾರು ವಿವರ ನೀಡುವುದು)	ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಈ ಕೆಳಕಂಡ ಗ್ರಾಮ ಪಂಚಾಯಿತಿಗಳನ್ನು ಪುರಸಭೆಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ: 1. ದಕ್ಷಿಣ ಕನ್ನಡ ಜಿಲ್ಲೆಯ ಸೋಮೇಶ್ವರ ಗ್ರಾಮ ಪಂಚಾಯಿತಿಯನ್ನು ಸೋಮೇಶ್ವರ ಪುರಸಭೆಯನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ. 2. ಬೆಂಗಳೂರು ನಗರ ಜಿಲ್ಲೆಯ ಮಾದವಾರ & ಸಿದ್ದನಹೊಸಹಳ್ಳಿ ಗ್ರಾಮ ಪಂಚಾಯಿತಿಗಳೊಂದಿಗೆ ಮಾದನಾಯಕನಹಳ್ಳಿ ಗ್ರಾಮ ಪಂಚಾಯಿತಿಗಳನ್ನೊಳಗೊಂಡು ರೂಪಿಸಲಾಗಿದ್ದ ಮಾದನಾಯಕನಹಳ್ಳಿ ಪುರಸಭೆಗೆ ಲಕ್ಷ್ಮೀಪುರ, ಚಿಕ್ಕಬಿದರಕಲ್ಲು ಮತ್ತು ಶ್ರೀಕಂಠಪುರ ಗ್ರಾಮ ಪಂಚಾಯಿತಿಗಳನ್ನು ಸೇರ್ಪಡೆಗೊಳಿಸಿ ಮಾದನಾಯಕನಹಳ್ಳಿ ನಗರಸಭೆಯನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ. 3. ಬೆಂಗಳೂರು ನಗರ ಜಿಲ್ಲೆಯ ಸೊಣ್ಣಪ್ಪನಹಳ್ಳಿ ಗ್ರಾಮ ಪಂಚಾಯಿತಿಯನ್ನು ಹುಣಸಮಾರನಹಳ್ಳಿ ಗ್ರಾಮ ಪಂಚಾಯಿತಿಯೊಂದಿಗೆ ಸೇರ್ಪಡೆಗೊಳಿಸಿ ಹುಣಸಮಾರನಹಳ್ಳಿ ಪುರಸಭೆಯನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ. 4. ಬೆಂಗಳೂರು ನಗರ ಜಿಲ್ಲೆಯ ಸೋಮಶೆಟ್ಟಿಹಳ್ಳಿ ಗ್ರಾಮ ಪಂಚಾಯಿತಿಯನ್ನು ಚಿಕ್ಕಬಾಣಾವರ ಗ್ರಾಮ ಪಂಚಾಯಿತಿಯೊಂದಿಗೆ ಸೇರ್ಪಡೆಗೊಳಿಸಿ ಚಿಕ್ಕಬಾಣಾವರ ಪುರಸಭೆಯನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ.
(ಆ)	ಗ್ರಾಮ ಪಂಚಾಯತ್‌ಗಳನ್ನು ಪುರಸಭೆಗಳನ್ನಾಗಿ ಪರಿವರ್ತಿಸಲು ಬೇಕಾದ ಜನಸಂಖ್ಯೆ ಎಷ್ಟು;	ಕರ್ನಾಟಕ ಪುರಸಭೆಗಳ ಅಧಿನಿಯಮ 1964ರ ಕಲಂ 3(1), 3(2) ರಲ್ಲಿ ನಿರ್ದಿಷ್ಟಪಡಿಸಿರುವ ಮಾನದಂಡಗಳನ್ವಯ ಪುರಸಭೆಯನ್ನಾಗಿ ಪರಿವರ್ತಿಸಲು ಜನಸಂಖ್ಯೆಯು 20,000 ಕ್ಕೆ ಕಡಿಮೆ ಇಲ್ಲದಂತೆ ಹಾಗೂ 50,000 ಕ್ಕೆ ಹೆಚ್ಚಿಲ್ಲದಂತಿರಬೇಕು.
(ಇ)	ಗ್ರಾಮ ಪಂಚಾಯತ್‌ಗಳನ್ನು ಪುರಸಭೆಯನ್ನಾಗಿ ಪರಿಗಣಿಸಿದ ಬಳಿಕ ಚುನಾವಣೆ ನಡೆಸಲು ಬೇಕಾಗುವ ಕಾಲಾವಧಿಯೆಷ್ಟು?	ಕರ್ನಾಟಕ ಪುರಸಭೆಗಳ ಅಧಿನಿಯಮ 1964ರ ಕಲಂ 357(ಬಿ) ರನ್ವಯ ಗ್ರಾಮ ಪಂಚಾಯಿತಿಯ ಸದಸ್ಯರಾಗಿ ತೆರವು ಮಾಡುವ ವ್ಯಕ್ತಿಗಳನ್ನೊಳಗೊಂಡ ಮಧ್ಯಕಾಲೀನ ಕೌನ್ಸಿಲ್‌ನ್ನು ರಚಿಸಬೇಕಿರುತ್ತದೆ. ಮಧ್ಯಕಾಲೀನ ಕೌನ್ಸಿಲ್ ರಚಿಸಲು ಅವಕಾಶವಿಲ್ಲದಿದ್ದಲ್ಲಿ ಕರ್ನಾಟಕ ಪುರಸಭೆಗಳ ಅಧಿನಿಯಮ 1964 ರ ಕಲಂ-315 ರನ್ವಯ ಆಡಳಿತಾಧಿಕಾರಿಗಳನ್ನು ನೇಮಿಸಬೇಕಿರುತ್ತದೆ. ಕಲಂ-358 ರನ್ವಯ ಮಧ್ಯಕಾಲೀನ ಕೌನ್ಸಿಲ್ ರಚನೆಗೊಂಡ ದಿನಾಂಕದಿಂದ 6 ತಿಂಗಳುಗಳ ಅವಧಿಯೊಳಗೆ ಹೊಸ ಮುನ್ಸಿಪಲ್ ಕೌನ್ಸಿಲ್‌ನ್ನು ರಚಿಸುವ ಬಗ್ಗೆ ಚುನಾವಣೆ ಪ್ರಕ್ರಿಯೆ ಕೈಗೊಳ್ಳಬೇಕಾಗುತ್ತದೆ.

..2

		ಆಯಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಸಂಬಂಧಪಟ್ಟ ಪುರಸಭೆಯ ವಾರ್ಡ್‌ವಾರು ಕ್ಷೇತ್ರ ಪುನರ್ ವಿಂಗಡಣೆ ಮಾಡಿ ಅಗತ್ಯ ಜನಸಂಖ್ಯೆ ಮಾಹಿತಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ವಾರ್ಡ್‌ವಾರು ಮೀಸಲಾತಿಯನ್ನು ನಿಗದಿಪಡಿಸಲಾಗುತ್ತದೆ. ಆನಂತರ ಚುನಾವಣಾ ಆಯೋಗದಿಂದ ಚುನಾವಣೆಗಳನ್ನು ನಡೆಸಲು ಕ್ರಮವಹಿಸಲಾಗುತ್ತದೆ.

ಸಂಖ್ಯೆ: ನಅಇ 18 ಎಲ್‌ಸಿಕ್ಯೂ 2022

(ಎನ್. ನಾಗರಾಜು ಎಂ ಟಿ ಬಿ)
ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ
ಸಾರ್ವಜನಿಕ ಉದ್ದಿಮೆಗಳ ಸಚಿವರು.